# ಕರ್ನಾಟಕ ವಿಧಾನ ಪರಿಷತ್ತು

ಸದಸ್ಯರ ಹೆಸರು : ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮ ನಿರ್ದೇಶನ ಹೊಂದಿದವರು)

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : 2647

ಉತ್ತರ ದಿನಾಂಕ : 25.03.2022

| ಕ್ರ.ಸ. | ಪ್ರಶ್ನೆ | ಉತ್ತರ |
|---|---|---|
| ಅ. | ವಿಜಯಪುರ ಜಿಲ್ಲೆಯಲ್ಲಿ ಜಲ ಜೀವನ್ ಮಿಷನ್ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದೆಯೇ; | ವಿಜಯಪುರ ಜಿಲ್ಲೆಯಲ್ಲಿ ಜಲ ಜೀವನ್ ಮಿಷನ್ ಯೋಜನೆಯಡಿ ಒಟ್ಟು 10 ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳನ್ನು ಪರಿಗಣಿಸಲಾಗಿದ್ದು, ಈ ಪೈಕಿ 07 ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳು ಅನುಷ್ಠಾನಗೊಂಡಿದ್ದು, 01 ಯೋಜನೆಯ ಕಾಮಗಾರಿ ಪ್ರಗತಿಯಲ್ಲಿರುತ್ತದೆ ಹಾಗೂ 02 ಸಮಗ್ರ ಯೋಜನೆಗಳು ಟೆಂಡರ್ ಪ್ರಕ್ರಿಯೆ ಹಂತದಲ್ಲಿರುತ್ತದೆ. |
| ಆ. | ಹಾಲಿ ಎಷ್ಟು ಮನೆಗಳಿಗೆ ಕುಡಿಯುವ ನೀರಿನ ಸಂಪರ್ಕವನ್ನು ಕಲ್ಪಿಸಲಾಗಿದೆ; ಸಂಪರ್ಕ ಕಲ್ಪಿಸದೆ ಉಳಿದಿರುವ ಮನೆಗಳೆಷ್ಟು; (ವಿವರ ಒದಗಿಸುವುದು) | ಜಲ ಜೀವನ್ ಮಿಷನ್ ಯೋಜನೆಯಡಿ ವಿಜಯಪುರ ಜಿಲ್ಲೆಯಲ್ಲಿ ಒಟ್ಟು 4,17,845 ಮನೆಗಳಿದ್ದು, ದಿನಾಂಕ:22.03.2022ರವರೆಗೆ ಒಟ್ಟು 1,68,141 ಮನೆಗಳಿಗೆ ಕುಡಿಯುವ ನೀರಿನ ಸಂಪರ್ಕವನ್ನು ಕಲ್ಪಿಸಲಾಗಿದೆ ಹಾಗೂ ಉಳಿದ 2,49,704 ಮನೆಗಳಿಗೆ ಕುಡಿಯುವ ನೀರಿನ ಸಂಪರ್ಕವನ್ನು ಕಲ್ಪಿಸಲು ಯೋಜಿಸಿದೆ. |
| ಇ. | ಈ ಯೋಜನೆಗೆ ಕೇಂದ್ರ ಹಾಗೂ ರಾಜ್ಯದಿಂದ ಒದಗಿಸಿರುವ ಹಣದ ಪಾಲೆಷ್ಟು? | ಜಲ ಜೀವನ್ ಮಿಷನ್ ಯೋಜನೆಯಡಿ ಗ್ರಾಮೀಣ ಭಾಗದ ಎಲ್ಲಾ ಜನವಸತಿಗಳಿಗೆ ಕಾರ್ಯಾತ್ಮಕ ನಳ ಸಂಪರ್ಕ ಒದಗಿಸುವ ಕಾಮಗಾರಿಯ ಅಂದಾಜು ಮೊತ್ತಕ್ಕೆ ಶೇ.42.50ರಷ್ಟನ್ನು ಕೇಂದ್ರದ, ಶೇ.42.50ರಷ್ಟನ್ನು ರಾಜ್ಯದ, ಶೇ.5.00ರಷ್ಟು ರಾಜ್ಯದ 15ನೇ ಹಣಕಾಸು ಆಯೋಗ ಅನುದಾನದ ಹಾಗೂ ಶೇ.10.00ರಷ್ಟು ಸಮುದಾಯ ವಂತಿಕೆಯ ಪಾಲು ಆಗಿರುತ್ತದೆ.<br>ಹೊಸ ಬಹುಗ್ರಾಮ ಕುಡಿಯುವ ನೀರಿನ ಯೋಜನೆ ಕಾಮಗಾರಿಗಳಿಗೆ ಹಾಗೂ ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳ ಪುನಃಶ್ಚೇತನ ಕಾಮಗಾರಿಯ ಅಂದಾಜು ಮೊತ್ತಕ್ಕೆ ಶೇ.50.00ರಷ್ಟು ಕೇಂದ್ರದ ಮತ್ತು ಶೇ.50.00ರಷ್ಟು ರಾಜ್ಯದ ಪಾಲು ಆಗಿರುತ್ತದೆ. |

ಸಂ:ಗ್ರಾಕುನೀ&ನೈಇ 201 ಗ್ರಾನೀಸ (4) 2022

(ಕೆ.ಎಸ್. ಈಶ್ವರಪ್ಪ)

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು